# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **2066 (2355)** |
| **ಉತ್ತರಿಸಬೇಕಾದ ಸಚಿವರು** | : | **ಕೃಷಿ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | : | **27-03-2026** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಅನುಚ್ಛೇದ 371(ಜೆ) ಅಡಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಗ್ರೂಪ್-ಸಿ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಸಲುವಾಗಿ ದಿನಾಂಕ 30.12.2019 ಎಷ್ಟು ಹುದ್ದೆಗಳಿಗೆ ನೇಮಕಾತಿ ಹೊರಡಿಸಲಾಗಿದೆ. ನೇಮಕಾತಿ ಅಧಿಸೂಚನ ವಿವರ ನೀಡುವುದು; | ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಅನುಚ್ಛೇದ 371(ಜೆ) ಅಡಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ವಿವಿಧ ವೃಂದದ ಒಟ್ಟು 34 ಗ್ರೂಪ್-ಸಿ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಸಲುವಾಗಿ ದಿನಾಂಕ: 30.12.2019 ರಂದು ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ನೇಮಕಾತಿ ಅಧಿಸೂಚನೆಯ ಪ್ರತಿಯನ್ನು ಅನುಭಂದ-1 ರಲ್ಲಿ ಲಗತ್ತಿಸಲಾಗಿದೆ. |
| ಆ | ಸದರಿ ನೇಮಕಾತಿ ಅಧಿಸೂಚನೆಯಲ್ಲಿರುವ ಹುದ್ದೆಗಳನ್ನು ಯಾವ ಆಧಾರದ ಮೇಲೆ ಭರ್ತಿ ಮಾಡಲಾಗುವುದು, ಭರ್ತಿ ಮಾಡಲು ಅನುಸರಿಸಿದ ಕ್ರಮಗಳೇನು: | ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013ರ ಅಡಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಗ್ರೂಪ್-ಸಿ ವಿವಿಧ ವೃಂದಗಳ ಹುದ್ದೆಗಳಲ್ಲಿ ಶೇಕಡ 8% ಹುದ್ದೆಗಳನ್ನು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗಾಗಿ ಮೀಸಲಿರಿಸಿದ ನೇರ ನೇಮಕಾತಿ ಹುದ್ದೆಗಳ ಪೈಕಿ ವಿವಿಧ ವೃಂದದ 34 ಗ್ರೂಪ್-ಸಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಅಲ್ಲದೇ ಸರ್ಕಾರವು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗಾಗಿ ಮೀಸಲಿರಿಸಿದ ಹುದ್ದೆಗಳನ್ನು ಭರ್ತಿ ಮಾಡುವಂತೆ ನೀಡುವ ನಿರ್ದೇಶನ / ಅನುಮತಿಯಂತೆ ಹಾಗೂ ಸರ್ಕಾರವು ನೇರ ನೇಮಕಾತಿಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಹೊರಡಿಸುವ ನಿಯಮ / ಆದೇಶದನ್ವಯ ಮತ್ತು ಕೃವಿವಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅನುಸರಿಸಲಾಗುವುದು. |
| ಇ | ಪರೀಕ್ಷೆ ಮತ್ತು ಸಂದರ್ಶನಗಳನ್ನು ಮುಗಿಸಿ ಇಲ್ಲಿಯವರಿಗೆ ಎಷ್ಟು ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ: ಸರ್ಕಾರದ ಅನುಮತಿ ಪಡೆಯಲಾಗಿದೆಯೇ? ಅಧಿಸೂಚನೆಯಲ್ಲಿ ನಮೂದಾಗಿರುವ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ನೇಮಕಾತಿ ಆಗಿದೆಯೇ: ಇಲ್ಲದಿದ್ದಲ್ಲಿ ಯಾವ ಕಾರಣಕ್ಕಾಗಿ ಕಡಿಮೆ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆ; ಸಂಪೂರ್ಣ ಮಾಹಿತಿ ನೀಡುವುದು: ನೇಮಕಾತಿ ಅಧಿಸೂಚನೆಯಲ್ಲಿರುವ ಎಲ್ಲಾ ಹುದ್ದೆಗಳಿಗೆ ನೇಮಕಾತಿ ಮಾಡದ ಇರಲು ಕಾರಣ? | ಇಲ್ಲಿಯವರಿಗೆ 24 ಹುದ್ದೆಗಳಿಗೆ ಪರೀಕ್ಷೆಗಳನ್ನು ಮುಗಿಸಿ ನೇಮಕಾತಿ ಮಾಡಲಾಗಿರುತ್ತದೆ. ಸದರಿ ಹುದ್ದೆಗಳ ನೇಮಕಾತಿಗೆ ಸರ್ಕಾರದ ಅನುಮತಿಯನ್ನು ನಿಡಲಾಗಿರುತ್ತದೆ. ಮುಂದುವರೆದು, ಸರ್ಕಾರದ ನಿರ್ದೇಶನದಂತೆ, ಕೃಷಿ ವಿಶ್ವವಿದ್ಯಾಲಯ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ವಿವಿಧ ವೃಂದದ ಒಟ್ಟು 24 ಗ್ರೂಪ್-ಸಿ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಸಲುವಾಗಿ ದಿನಾಂಕ 30.12.2019 ರಂದು ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಹುದ್ದೆಗಳಿಗೆ ಸಂಬಂಧಿಸಿದಂತೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ನೇಮಕಾತಿ ಆದೇಶವನ್ನು ಹೊರಡಿಸಲು ಹಾಗೂ ನೇರ ನೇಮಕಾತಿಯಡಿ ಭರ್ತಿಯಾಗುವ ಹುದ್ದೆಗಳಿಗೆ ಆಯವ್ಯಯದಲ್ಲಿ ಸೂಕ್ತ ಅನುದಾನವನ್ನು ಕಲ್ಪಿಸಿಕೊಡುವಂತೆ ಅನುಮತಿಯನ್ನು ಕೋರಲಾಗಿರುತ್ತದೆ. ಸರ್ಕಾರವು ಗ್ರೂಪ್-ಸಿ ವೃಂದದ 24 ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾತ್ರ ಆದೇಶವನ್ನು ನೀಡಲು ಸಹಮತಿಸಿರುವಂತೆ ನೇಮಕಾತಿ ಆದೇಶವನ್ನು ನೀಡಲಾಗಿರುತ್ತದೆ. |

ಇ-ಸಂಖ್ಯೆ: AGRI/35/AUB/2026

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು